# ಕರ್ನಾಟಕ ಸರ್ಕಾರ
## ಪಂಚಾಯತ್ ರಾಜ್ ಆಯುಕ್ತಾಲಯ
**ಕಾಳಿದಾಸ ರಸ್ತೆ, ಗಾಂಧಿನಗರ ಬೆಂಗಳೂರು – 560 009.**

---

ಸಂಖ್ಯೆ:ಕಪಂರಾಆ/ಅಭಿವೃದ್ಧಿ/407/ಗ್ರಾ.ಆ/2023 ದಿನಾಂಕ:02.11.2023
c.no: 1167700

**ಇವರಿಗೆ,**

ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯಿತಿ
ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು

**ಮಾನ್ಯರೆ,**

**ವಿಷಯ:** **"ಗ್ರಾಮ ಆರೋಗ್ಯ"** ಯೋಜನೆಗೆ ಸಂಬಂಧಿಸಿದಂತೆ ಸಾರ್ವಜನಿಕರಲ್ಲಿ ಅರಿವು ಮೂಡಿಸುವ ಉದ್ದೇಶದಿಂದ ಆರೋಗ್ಯ ಸಂಬಂಧಿತ Audio ವನ್ನು ಸ್ವಚ್ಛವಾಹಿನಿಯಲ್ಲಿ ಅಳವಡಿಸುವ ಕುರಿತು.

*********

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ಸಾರ್ವಜನಿಕ ಆರೋಗ್ಯ ಕ್ಷೇತ್ರದ ನಿರ್ವಹಣೆಗಾಗಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಹಾಗೂ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಜೊತೆಗೂಡಿ, ಕರ್ನಾಟಕ ಹೆಲ್ತ್ ಪ್ರಮೋಷನ್ ಟ್ರಸ್ಟ್ ಸಹಯೋಗದೊಂದಿಗೆ ಗ್ರಾಮ ಆರೋಗ್ಯವನ್ನು ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಅನುಷ್ಠಾನಗೊಳಿಸಲಾಗಿದೆ.

ಕ್ಷಯಮುಕ್ತ ಗ್ರಾಮಗಳನ್ನು ಸಾಧಿಸಲು ಮತ್ತು ಅಸಾಂಕ್ರಾಮಿಕ ರೋಗಗಳ ಪತ್ತೆ ಮತ್ತು ನಿರ್ವಹಣೆ, ಮಾನಸಿಕ ಆರೋಗ್ಯ, ಲಸಿಕಾ ಆಂದೋಲನ, ಬಾಲ್ಯವಿವಾಹ-ವಿರೋಧಿ ಆಂದೋಲನಗಳಂತಹ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ. ಅಸಾಂಕ್ರಾಮಿಕ ರೋಗಗಳ ಮತ್ತು ಟಿ.ಬಿ ಪರೀಕ್ಷೆಗಾಗಿ, ಅಪೌಷ್ಟಿಕತೆ ಮತ್ತು ರಕ್ತಹೀನತೆ ಪತ್ತೆ ಹಚ್ಚಲು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಿಂದ ಗ್ರಾಮ ಆರೋಗ್ಯದಡಿ ಬಿಡುಗಡೆ ಮಾಡಲಾದ ಅನುದಾನದಲ್ಲಿ ಜಿಲ್ಲಾ ಪಂಚಾಯಿತಿಗಳು ಆರೋಗ್ಯ ಕಿಟ್ ಖರೀದಿಸಿ ಗ್ರಾಮ ಪಂಚಾಯಿತಿಗಳಿಗೆ ವಿತರಿಸಲಾಗಿದೆ.

ಈ ಮೂಲಕ ಸಾರ್ವಜನಿಕರ ಆರೋಗ್ಯಕ್ಕೆ ಪೂರಕವಾಗಿ ಕಾರ್ಯನಿರ್ವಹಿಸಲಾಗುತ್ತಿದ್ದು, ಸದರಿ ಯೋಜನೆಯ ಪರಿಕಲ್ಪನೆ, ಉದ್ದೇಶ ಮತ್ತು ಯೋಜನೆಯನ್ನು ಸದುಪಯೋಗಪಡಿಸಿಕೊಂಡು ಆರೋಗ್ಯ ಸ್ಥಿತಿಯನ್ನು ಸಮತೋಲನವಾಗಿ ಕಾಯ್ದುಕೊಳ್ಳುವಂತೆ ಪ್ರಚುರಪಡಿಸಲು ಸಾರ್ವಜನಿಕರಲ್ಲಿ ಅರಿವು ಮೂಡಿಸುವ ಉದ್ದೇಶದಿಂದ ಗ್ರಾಮ ಆರೋಗ್ಯಕ್ಕೆ ಸಂಬಂಧಿಸಿದಂತೆ ಸಿದ್ದಪಡಿಸಿದ 2-3 ನಿಮಿಷಗಳ 1 ಹಾಡನ್ನು (2 ಆವೃತ್ತಿಗಳಲ್ಲಿ) ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯದ ಇಲಾಖಾ

ವೆಬ್ ಸೈಟ್ ಮೂಲಕ /ಈ ಕೆಳಗಿನ ಲಿಂಕ್ ಮೂಲಕ Download ಮಾಡಿ ಗ್ರಾಮ ಪಂಚಾಯಿತಿಗಳಲ್ಲಿ ಘನತ್ಯಾಜ್ಯ ನಿರ್ವಹಣೆಗಾಗಿ ಬಳಸುತ್ತಿರುವ ಸ್ವಚ್ಛವಾಹಿನಿ ವಾಹನದಲ್ಲಿ ಅಳವಡಿಸಲು ಕ್ರಮ ವಹಿಸುವಂತೆ ಗ್ರಾಮ ಪಂಚಾಯಿತಿಗಳಿಗೆ ನಿರ್ದೇಶನ ನೀಡುವಂತೆ ತಿಳಿಸಿದೆ.

**Audio Link:**
**https://prcrdpr.karnataka.gov.in/info2/Grama+Panchayat+Arogya+Amrutha+Abhiyaana/Audio/kn**

ತಮ್ಮ ವಿಶ್ವಾಸಿ,

ಆಯುಕ್ತರು
ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ
ಬೆಂಗಳೂರು

**ಪ್ರತಿಯನ್ನು ಅಗತ್ಯ ಕ್ರಮಕ್ಕಾಗಿ:**

1. ರಾಜ್ಯದ ಎಲ್ಲಾ ತಾಲ್ಲೂಕು ಪಂಚಾಯಿತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳು (ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಮೂಲಕ)

2. ರಾಜ್ಯದ ಎಲ್ಲಾ ಗ್ರಾಮ ಪಂಚಾಯಿತಿ, ಪಂಚಾಯಿತಿ ಅಭಿವೃದ್ಧಿಅಧಿಕಾರಿಗಳಿಗೆ (ಸಂಬಂಧಿಸಿದ ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿಗಳ ಮುಖಾಂತರ)

**ಪ್ರತಿಯನ್ನು ಮಾಹಿತಿಗಾಗಿ:**

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ (ಪಂಚಾಯತ್ ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು
2. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆರವರ ಆಪ್ತ ಕಾರ್ಯದರ್ಶಿ.
3. ಆಯುಕ್ತರು, ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಆಪ್ತ ಸಹಾಯಕರು, ಕೆ.ಜಿ.ರಸ್ತೆ, ಬೆಂಗಳೂರು
4. ಮುಖ್ಯ ಸಂಪಾದಕರು, ಕರ್ನಾಟಕ ವಿಕಾಸ ಪತ್ರಿಕೆ/ವೆಬ್‌ಸೈಟ್, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ
5. ಮುಖ್ಯ ಕಾರ್ಯನಿರ್ವಾಹಣಾಧಿಕಾರಿ, ಕರ್ನಾಟಕ ಹೆಲ್ತ್ ಪ್ರಮೋಷನ್ ಟ್ರಸ್ಟ್, ಬೆಂಗಳೂರು.
6. ಶಾಖಾ ರಕ್ಷಾ ಕಡತ/ ಹೆಚ್ಚುವರಿ ಪ್ರತಿ .